# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ

## ದಿನಾಂಕ: 05-11-2022 ರಂದು ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

ದಿನಾಂಕ: 05-11-2022 ರಂದು ಮದ್ಯಾಹ್ನ 3.00 ಗಂಟೆಗೆ ಬಿ.ಬಿ.ಎಂ.ಪಿ ಯಲಹಂಕ ವಿಭಾಗದ ಕಛೇರಿಯಲ್ಲಿ ವಾರ್ಡ್ ನಂ-01ರ ವಾರ್ಡ್ ಸಮಿತಿಯ ಮಾನ್ಯ ನೋಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ನೆಡೆದ ವಾರ್ಡ್ ಕಮಟಿ ಸಭೆಯ ನಡವಳಿಗಳು.

| ಕ್ರ.ಸಂ | ಸಭೆಯಲ್ಲಿ ಭಾಗವಹಿಸಿದ ಅಧಿಕಾರಿ ಹೆಸರು | ಪದನಾಮ |
|---|---|---|
| 01 | ಶ್ರೀ.ರಾಮಸಂಜೀವಯ್ಯ | ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ವಿಭಾಗ ಹಾಗೂ ಬಿ.ಬಿ.ಎಂ.ಪಿ ನೋಡಲ್ ಅಧಿಕಾರಿಗಳು (ವಾರ್ಡ್ ನಂ-01) |
| 02 | ಶ್ರೀ.ದೇವರಾಜಯ್ಯ.ಕೆ.ಬಿ. | ಸಹಾಯಕ ಅಭಿಯಂತರರು (ವಾರ್ಡ್ ನಂ-01) |
| 03 | ಶ್ರೀ.ಕೆ.ಎನ್. ಬಾಬುರೆಡ್ಡಿ | ಸಹಾಯಕ ಅಭಿಯಂತರರು (ವಿದ್ಯುತ್) |
| 04 | ಶ್ರೀ.ಅಶೋಕ್ .ಎಂ.ಆರ್ | ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ ಗೈರು ಹಾಜರಾಗಿರುತ್ತಾರೆ. |
| 05 | ಶ್ರೀ.ಶಿವಕುಮಾರ್.ಎ.ವಿ | ರೆವಿನ್ಯೂ ಇನ್ಸ್‌ಪೇಕ್ಟರ್ ಗೈರು ಹಾಜರಾಗಿರುತ್ತಾರೆ. |
| 06 | ಶ್ರೀಮತಿ. ಸುನಂದಮ್ಮ | ಹಿರಿಯ ಆರೋಗ್ಯ ಪರಿವೀಕ್ಷಕರು |
| 07 | ಶ್ರೀ. ವಿನಯ ಕುಮಾರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 08 | ಶ್ರೀ. ಎನ್. ಶ್ರೀರಾಮ ರೆಡ್ಡಿ | ರೆವಿನ್ಯೂ ಇನ್ಸ್‌ಪೇಕ್ಟರ್ ಗೈರು ಹಾಜರಾಗಿರುತ್ತಾರೆ. |
| 09 | ಶ್ರೀ.ವಿವೇಕ್ | ಕಿರಿಯ ಆರೋಗ್ಯಪರಿವೀಕ್ಷಕರು ವಾಡ್-1 |
| 10 | ಶ್ರೀ.ಕುಮಾರ್ ಸ್ವಾಮಿ | ಜಾನುವಾರ ಅಧಿಕಾರಿಗಳು |
| 11 | ಶ್ರೀ.ನವೀನ್ ಕುಮಾರ್ ವಿ | ಸಹಾಯಕ ಅಭಿಯಂತರರು (ವಿದ್ಯುತ್) ಬಿ.ಬಿ.ಎಂ.ಪಿ |
| | ಬಡಾವಣೆ ಕ್ಷೇಮಾಭಿವೃದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು/ಸಾರ್ವಜನಿಕರು | |
| 01 | ಶ್ರೀ.ಹೇಮರಾಜ್ | ಸ್ಥಳೀಯ ಮುಖಂಡರು |
| 02 | ಶ್ರೀ. ಅ.ಬ.ಶಿವಕುಮಾರ್ | ಸ್ಥಳೀಯ ಮುಖಂಡರು |
| 03 | ಶ್ರೀ.ರಾಮರೆಡ್ಡಿ | ಸ್ಥಳೀಯ ನಿವಾಸಿಗಳು |

| | | |
|---|---|---|
| 04 | ಶ್ರೀ.ಎ.ಎಸ್.ರಾಜು | ಸ್ಥಳೀಯ ನಿವಾಸಿಗಳು |
| 05 | ಶ್ರೀ.ಶ್ರೀನಿವಾಸಲು | ಸ್ಥಳೀಯ ನಿವಾಸಿಗಳು |
| 06 | ಶ್ರೀ.ವೆಂಕಟೇಶ್ | ಮಾರುತಿನಗರ |
| 07 | ಶ್ರೀ.ದಶರಥ | ಯಲಹಂಕ |
| 08 | ಶ್ರೀ.ಎ.ಎನ್.ಮದುಸೂದನ್ (ಮಂಜುನಾಥ) | ಎಲೆಕ್ಟ್ರೀಕಲ್ಸ್ ಗುತ್ತಿಗೆದಾರರು |
| 09 | ಶ್ರೀ.ಆಕಾಶ್ | ಮಾರ್ಷಲ್ |

ಸಭೆಗೆ ಹಾಜರಿದ್ದ ನೊಡೆಲ್ ಅಧಿಕಾರಿಗಳು ಹಾಗೂ ಬಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರ ಸಭೆಗೆ ಸ್ವಾಗತಿಸುತ್ತಾ ಸಭೆ ಪ್ರಾರಂಭಿಸಲು ನೊಡೆಲ್ ಅಧಿಕಾರಿರವರನ್ನು ಕೋರಲಾಯಿತು.

ಶ್ರೀ.ರಾಮಸಂಜೀವಯ್ಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ವಿಭಾಗ ಹಾಗೂ ಸಮಿತಿಯ ನೊಡೆಲ್ ಅಧಿಕಾರಿಯವರು ಸಬೆಯನ್ನು ಪ್ರಾರಂಭಿಸಿ ಈ ಹಿಂದಿನ ಸಭೆಯಲ್ಲಿ ಅಂದರೆ ದಿನಾಂಕ: 05-11-2022 ರಂದು ನಡೆದ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆ ಕೇಳಿದರು. ಹಾಗೂ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಸೂಚಿಸಿದರು. ಹಾಗೂ ಈ ಹಿಂದೆ ಕೈಗೊಂಡಿರುವ ಸಭೆಯ ನಡವಳಿಗಳನ್ನು ಸಭೆಯಲ್ಲಿ ವರದಿಯನ್ನು ಒದಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 108 ಅಡಿ ಎತ್ತರದ ಕೆಂಪೇಗೌಡ ಪ್ರತಿಮೆ ನಿರ್ಮಾಣಕ್ಕೆ ಮೃತ್ತಿಗೆ (ಮಣ್ಣು) ಅನ್ನು ಸಂಗ್ರಹಣೆ ಅಭಿಯಾನ ಕೈಗೊಂಡಿದ್ದು, ಅದರಂತೆ ದಿನಾಂಕ: 5-11-2022 ರಂದು ಯಲಹಂಕ ವಿಭಾಗದ ವಾರ್ಡ್‌ಗಳಲ್ಲಿ ಮೃತ್ತಿಗೆ ಸಂಗ್ರಹಣಾ ಅಭಿಯಾನ ಕೈಗೊಳ್ಳಾಲಾಯಿತ್ತು. ಅದರಂತೆ ಯಲಹಂಕದ ಪ್ರಮುಖ ಬೀದಿಗಳಲ್ಲಿ ಕೆಂಪೇಗೌಡ ಪ್ರತಿಮೆ ಮೆರವಣಿಗೆ ಮಾಡಿ ಯಲಹಂಕದಲ್ಲಿರುವ ಎಲ್ಲಾ ದೇವಸ್ಥಾನಗಳಿಂದ ಮೃತ್ತಿಗೆ ಸಂಗ್ರಹಣೆ ಮಾಡಲಾಯಿತು. ಈ ಕಾರ್ಯಕ್ರಮದಲ್ಲಿ ಮಾನ್ಯ ಶಾಸಕರಾದ ಶ್ರೀ.ಎಸ್.ಆರ್.ವಿಶ್ವನಾಥ್ ರವರು, ಶ್ರೀಮತಿ. ವಾಣಿಶ್ರೀ ರವರು, ಜಂಟಿ ಆಯುಕ್ತರು, ಶ್ರೀ.ಅಶ್ವಥ್‌ನಾರಾಯಣ ರವರು, ಜಂಟಿ ಆಯುಕ್ತರು, ಕಾರ್ಯಪಾಲಕ ಅಭಿಯಂತರರು, ಬಿ.ಬಿ.ಎಂ.ಪಿ ಎಲ್ಲಾ ಸಿಬ್ಬಂದಿಗಳು, ಶ್ರೀ.ಅ.ಬ.ಶಿವಕುಮಾರ್ ರವರು ಮು.ಕೃಷ್ಣಮೂರ್ತಿಯವರು ಮತ್ತು ಸ್ಥಳೀಯ ಸಂಘ ಸಂಸ್ಥೆಗಳ ಕಾರ್ಯದರ್ಶಿಗಳು ಸದಸ್ಯರುಗಳು ಭಾಗವಹಿಸಿರುತ್ತಾರೆ. ಹಾಗೂ ಈ ಕಾರ್ಯಕ್ರಮವನ್ನು ಬೆಳಗ್ಗೆ 9.00 ರಿಂದ 12.00 ಗಂಟೆಯವರೆಗೆ ನೆರವೇರಿಸಲಾಗಿರುತ್ತದೆ. | | |
| 02 | ಯಲಹಂಕ ಕೆರೆಯ ಅಳ್ಳಾಳನಾಥ ದೇವಸ್ಥಾನದ ಹತ್ತಿರ ಪಿಂಡ ಪ್ರಧಾನ ಮಾಡಲು ಹೊಸದಾಗಿ ಕಲ್ಯಾಣಿ ನಿರ್ಮಾಣ ಮಾಡಲು ಮತ್ತು ಬೊರ್‌ವೆಲ್ ಹಾಕಿಸಿಕೊಡುವಂತೆ ಸ್ಥಳೀಯ ನಿವಾಸಿಗಳಾದ ಶ್ರೀ.ಅ.ಬ.ಶಿವಕುಮಾರ್ ರವರು ಕೋರಿದರು. | ಇದಕ್ಕೆ ಸಂಬಂದಿಸಿದಂತೆ ನೊಡೆಲ್ ಅದಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ತಿಳಿಸಿದರು | ಸಹಾಯಕ ಅಭಿಯಂತರರು ವಾರ್ಡ್ ನಂ-01 |

| | | | |
|---|---|---|---|
| 03 | ಯಲಹಂಕ ಗಾಂಧಿನಗರ ಕೆ.ಹೆಚ್.ಬಿ ಕಾಲೋನಿಯಲ್ಲಿರುವ ಅಡ್ಡರಸ್ತೆಗಳಿಗೆ ಹೊಸದಾಗಿ ಡಾಂಬರೀಕರಣ ಮಾಡಿದ್ದು, ಈ ರಸ್ತೆಗಳಿಗೆ ನಾಮಫಲಕಗಳನ್ನು ಅಳವಡಿಸಿಕೊಡಬೇಕೆಂದು ಸಭೆಯಲ್ಲಿ ಅ.ಬ.ಶಿವಕುಮಾರ್ ರವರು ಕೋರಿದರು | ಇದಕ್ಕೆ ಸಂಬಂದಿಸಿದಂತೆ ನೊಡೆಲ್ ಅದಿಕಾರಿಗಳು ಮಾತನಾಡಿ ಹೊಸದಾಗಿ ಡಾಂಬರೀಕರಣ ಮಾಡಿರುವ ರಸ್ತೆಗಳಿಗೆ ನಾಮಫಲಕಗಳನ್ನು ಅಳವಡಿಸುವುದಾಗಿ ಸಭೆಗೆ ತಿಳಿಸಿದರು. | ಸಹಾಯಕ ಅಭಿಯಂತರರು ವಾರ್ಡ್ ನಂ–01 |
| 04 | ಕೆಂಪೇಗೌಡ ವಾರ್ಡ್ ನಂ–01ರ ವ್ಯಾಪ್ತಿಯಲ್ಲಿ ಸ್ಥಗೀತಗೊಂಡಿರುವ ಬೊರ್‌ವೆಲ್‌ಗಳಿಂದ ತೆಗೆದಿರುವ ಪಂಪು ಮೋಟಾರ್‌ಗಳ ವಿವರಣೆ ಕೋರಿದರು. | ಇದಕ್ಕೆ ಸಂಬಂದಿಸಿದಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಮಾತನಾಡಿ ಸ್ಟಿಲ್ಟ್ ತುಂಬಿರುವ ಬೊರ್‌ವೆಲ್‌ಗಳಿಂದ ಹಾಗೂ ಸ್ಥಗೀತಗೊಂಡಿರುವ ಬೊರ್‌ವೆಲ್‌ಗಳಿಂದ ಚಾಲ್ತಿಯಲ್ಲಿರುವ ಪಂಪ್ ಮೋಟಾರ್‌ಗಳನ್ನು ಹೊರತೆಗೆದು ಸ್ಟಾಕ್ ಕಾರ್ಯವಿಧಾನದಂತೆ ಶೇಖರಣೆ ಮಾಡಲಾಗಿದ್ದು, ಇದರಲ್ಲಿ ಕೆಲವೊಂದು ಸ್ಕ್ರ್ಯಾಪ್‌ಗೆ ಹಾಕಲಾಗಿರುತ್ತದೆ. ಎಂಬುದಾಗಿ ಸಭೆಗೆ ವಿವರಣೆ ನೀಡಿದರು | ಬಿ.ಡಬ್ಲ್ಯೂ.ಎಸ್.ಎಸ್. ಬಿ. ಸಹಾಯಕ ಅಭಿಯಂತರರು |
| 05 | ಕೆಂಪೇಗೌಡ ವಾರ್ಡ್ ನಂ–01ರ ವ್ಯಾಪ್ತಿಯಲ್ಲಿರುವ ಕೆಂಪೇಗೌಡ ಪ್ರತಿಮೆ ಹತ್ತಿರ ಕೆಂಪೇಗೌಡ ಸೊಸೆ ಶ್ರೀಮತಿ. ಲಕ್ಷ್ಮಿದೇವಿ ಪುತ್ಥಳಿ ನಿರ್ಮಿಸಬೇಕೆಂದು ಹಾಗೂ ಯಲಹಂಕವನ್ನು ಕೆಂಪೇಗೌಡ ಕೋಟೆ ರೀತಿಯಲ್ಲಿ ಅಭಿವೃದ್ದಿಪಡಿಸಬೇಕೆಂದು ಸಭೆಯಲ್ಲಿ ಅ.ಬ.ಶಿವಕುಮಾರ್ ರವರು ಕೋರಿದರು. | ಇದಕ್ಕೆ ಸಂಬಂದಿಸಿದಂತೆ ನೊಡೆಲ್ ಅಧಿಕಾರಿಗಳು ಮಾತನಾಡಿ ಮೇಲಾಧಿಕಾರಿಗಳ ಜೊತೆ ಚರ್ಚಿಸಿ ತಿರ್ಮಾನಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು | ಸಹಾಯಕ ಅಭಿಯಂತರರು ವಾರ್ಡ್ –1 |

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು, ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ.ಕೆ.ಬಿ.ದೇವರಾಜಯ್ಯ
ಸಹಾಯಕ ಅಭಿಯಂತರರು

ಶ್ರೀ.ರಾಮಸಂಜೀವಯ್ಯ
ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ
ನೋಡೆಲ್ ಅಧಿಕಾರಿಗಳು ವಾರ್ಡ್ ನಂ–01

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರಿಗೆ ಕಳುಹಿಸಿದೆ.

4. ಕಾರ್ಯಪಾಲಕ ಅಭಿಯಂತರರು, ಬಿ.ಬಿ.ಎಂ.ಪಿ ಯಲಹಂಕ ವಿಭಾಗ/ವಿದ್ಯುತ್/ರಸ್ತೆ ಮತ್ತು ಮೂಲಭೂತ ಸೌಕರ್ಯ/ಯೋಜನೆ/ಕೆರೆಗಳು/ ಯಲಹಂಕ ವಲಯ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ/ ವಿದ್ಯುತ್/ ಬೇಸ್ಕಾಂ/ ಬಿಡಬ್ಲ್ಯೂ.ಎಸ್.ಎಸ್.ಬಿ/ಬೊರೆವೆಲ್ ಡಿವಿಷನ್/ ಯೋಜನೆ/ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ/ಜಾಹಿರಾತು ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
7. ಆರಕ್ಷಕ ನೀರಿಕ್ಷಕರು ಯಲಹಂಕ ಪೊಲೀಸ್ ಠಾಣೆ ಸಂಚಾರಿ/ ಕಾನೂನು ಸುವ್ಯವಸ್ಥೆ/ ಯಲಹಂಕ ಬೆಂಗಳೂರು ರವರ ಸೂಕ್ತ ಕ್ರಮಕ್ಕಾಗಿ.
8. ಜಾನುವಾರಿ ಅಧಿಕಾರಿಗಳು ಪಶುಪಾಲನೆ ವಿಭಾಗ ಯಲಹಂಕ ವಲಯ ರವರ ಸೂಕ್ತ ಕ್ರಮಕ್ಕಾಗಿ.
9. ಅಧೀಕ್ಷಕರು ತೋಟಗಾರಿಕೆ ಇಲಾಖೆ ಬಿ.ಬಿ.ಎಂ.ಪಿ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
10. ಡಿಪೋ ಮ್ಯಾನೇಜರ್ ಡಿಪೊ-13 ಪುಟ್ಟೇನಹಳ್ಳಿ ಡಿಪೋ ಯಲಹಂಕ ಬೆಂಗಳೂರು ಸೂಕ್ತ ಕ್ರಮಕ್ಕಾಗಿ.
11. ಕಛೇರಿ ಕಡತಕ್ಕೆ.